ಅಭಿಯಾಚನೆ ಕ್ರಮಾಂಕ–೪೦ ಸಚಿವಾಲಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಚಿವಾಲಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨,೮೦ ೯೪,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ–೪೧ ಜಿಲ್ಲಾಡಳಿತ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಿಲ್ಲಾಡಳಿತಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೯,೫೮,೮೭,೦೦೦ ರೂ ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೪೨–ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩–೧೯೮೭ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮುಖ್ಯಮಂತ್ರಿಯವರ ವಿವಿಧ ಅಭಿಯಾಚನೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೧,೨೭,೭೮,೦೦೦ ರೂ.ಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

Supplementary Estimates for 1986-87

ಮಂಡನಾ ಪ್ರಸ್ತಾವ

ಅಧ್ಯಕ್ಷರು.—ಈಗ ಅನುಪೂರಕ ಅನುದಾನ ಬೇಡಿಕೆಗಳ (೨ನೇ ಕಂತು) ಮೇಲಿನ ಪ್ರಸ್ತಾವವನ್ನು ಮುಖ್ಯ ಮಂತ್ರಿಗಳು ಮಂಡಿಸುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಟೆಲಿಕ್ಸ್ ಮೆಸೇಜ್ ಕಳುಹಿಸಿ ಎಲೆಕ್ಷನ್ ಅನ್ನು ವಿತ್ ಪೋಡ್ಡ್ ಮಾಡಿಲ್ಲವೆ ? ಆ ರೀತಿ ಇದನ್ನು ವಿತಕ್ಕೆ ಮಾಡುವುದಕ್ಕಾಗುವುದಿಲ್ಲ ?

ಅಧ್ಯಕ್ಷರು.—ಆ ವಿಚಾರ ಆಗಲೇ ಮುಕ್ತಾಯವಾಯಿತು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ಈ ರೀತಿ ಮಾಡಿದರೆ ನಾವು ಮಾತನಾಡುವುದು ಕಷ್ಟವಾಗುತ್ತದೆ.

ಅಧ್ಯಕ್ಷರು.—ಈಗ ನಾನು ಏನೂ ಮಾಡುವುದಕ್ಕಾಗುವುದಿಲ್ಲ, ಈಗ ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ.—ನಾವು ಅದನ್ನು ಪ್ರೊಟೆಸ್ಟ್ ಮಾಡಿ ವಾಕ್‌ಔಟ್ ಮಾಡುತ್ತೇವೆ.

ಶ್ರೀಮತಿ ಕೆ. ಎಸ್. ನಾಗರತ್ನಮ್ಮ.—ಈ ತರಹ ಆದರೆ ಕಾರ್ಯಕಲಾಪ ಮಾಡುವುದು ಕಷ್ಟವಾಗುತ್ತದೆ

(ಈ ಹಂತದಲ್ಲಿ ಮಾನ್ಯ ಕಾಂಗ್ರೆಸ್ ಪಕ್ಷದ ಸದಸ್ಯರೆಲ್ಲ ಸಭಾತ್ಯಾಗ ಮಾಡಿದರು)

ಶ್ರೀ ಜೆ. ಹೆಚ್. ಪಟೇಲ್.—ವಾಕ್‌ಔಟ್ ಮಾಡಿದವರಿಗೆ ಹಾಗೆಯೇ ಕೇರಳ ತನಕ ಹೋಗಿ ಬರಲಿ.

ಶ್ರೀ ಎ. ಲಕ್ಷ್ಮೀಸಾಗರ್.—ಎರಡನೇ ಕಂತಿನ ಅನುಪೂರಕ ಬೇಡಿಕೆಗಳು ಏನಿವೆ ಇದರಲ್ಲಿ ಸರ್ಕಾರದಿಂದ ಖರ್ಚಾಗತಕ್ಕದ್ದು ೯೭.೨೭ ಕೋಟಿ ರೂಪಾಯಿಗಳು. ಇದು ಅವಶ್ಯಕವಾಗಿ ವರ್ಷದ ವಂಧ್ಯದಲ್ಲಿ ಖರ್ಚು ಮಾಡಬೇಕಾದ ಹಣಕ್ಕೆ ಸಂಬಂಧಪಟ್ಟದ್ದಾಗಿದೆ. ಮಾನ್ಯ ಸಭೆ ಈ ಬೇಡಿಕೆಗಳಿಗೆ ಅನುಮತಿ ಕೊಡಬೇಕೆಂದು ಪ್ರಾರ್ಥಿಸುತ್ತೇನೆ.